Sl. No.	District	Allocation	Total Expenditure
23.	Raichur	220.96	38.24
24.	Shimoga	140.71	15.85
25.	Tumkur	395.49	137.90
26.	U.Kannada	128.03	40.27
27.	Udupi	101.39	101.83
	Total	**6127.90**	**2196.00**

ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಜನಪ್ರತಿನಿಧಿಗಳ ಗಮನಕ್ಕೆ ತಾರದೆ ಶಾಲಾ ಕೊಠಡಿಗಳ ವಿತರಣೆ

2893 - ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉಡುಪಿ ಜಿಲ್ಲೆ ಕುಂದಾಪುರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಜನಪ್ರತಿನಿಧಿಗಳ ಗಮನಕ್ಕೆ ತಾರದೆ ಶಾಲಾ ಕೊಠಡಿಗಳನ್ನು ವಿತರಣೆ ಮಾಡಿರುವ ವಿಷಯ ನಿಜವೇ?*

ಆ) *ಹಾಗಿದ್ದಲ್ಲಿ, ಈ ಹಂಚಿಕೆಗೆ ಕಾರಣರಾದ ಸಿಬ್ಬಂದಿಯವರ ಮೇಲೆ ಇಲಾಖೆ ತೆಗೆದುಕೊಳ್ಳುವ ಕ್ರಮವೇನು?*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಇನ್ನು ಮುಂದೆ ಇಂತಹ ಘಟನೆಗಳು ಆಗದಂತೆ ಎಚ್ಚರವಹಿಸಿ ಸಂಬಂಧಪಟ್ಟ ಕ್ಷೇತ್ರಗಳ ಮಾನ್ಯ ಶಾಸಕರು ಮತ್ತು ಜನ ಪ್ರತಿನಿಧಿಗಳನ್ನು ಖುದ್ದಾಗಿ ಸಂಪರ್ಕಿಸಿ ಅವರ ಅಭಿಪ್ರಾಯಗಳಂತೆ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗುವುದು.

ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷರಾಗಲು ತಾಲ್ಲೂಕ್ ಪಂಚಾಯತ್ ಸದಸ್ಯರಿಗೆ ಅನುಮತಿ

2894 - ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸರಕಾರದ ಸುತ್ತೋಲೆಯ ಪ್ರಕಾರ ಶಾಲಾಭಿವೃದ್ಧಿ ಸಮಿತಿಯಲ್ಲಿ ತಾಲ್ಲೂಕು ಪಂಚಾಯತ್ ಸದಸ್ಯರು ಅಧ್ಯಕ್ಷರಾಗಲು ಅವಕಾಶವಿಲ್ಲದಿರುವುದು ನಿಜವೇ?*

ಅ) ಈ ಸದಸ್ಯರಿಗೆ ಅವಕಾಶ ಕಲ್ಪಿಸಲಾಗುವುದೇ?

ಇ) ಹಾಗಿದ್ದಲ್ಲಿ ಸುತ್ತೋಲೆಗೆ ಸೂಕ್ತ ತಿದ್ದುಪಡಿ ತರಲಾಗುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷರಾಗಲು ಅವಕಾಶವಿರುತ್ತದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಔಷಧಿ ನಿಯಂತ್ರಣ ಇಲಾಖೆಯ ಕಾರ್ಯ ನಿರ್ವಹಣೆ

2896 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆಯ ಔಷಧಿ ನಿಯಂತ್ರಣ ಇಲಾಖೆಯಲ್ಲಿ ನಿಯಮಾನುಸಾರ ಸಿಬ್ಬಂದಿ ಇದ್ದಾರೆಯೆ?

ಆ) ಕಲಬೆರಕೆ ಹಾಗೂ ಅವಧಿ ಮೀರಿದ ಔಷಧಿ ಮಾರಾಟ ತಡೆಗಟ್ಟಲು ಕೈಗೊಂಡ ಕ್ರಮಗಳೇನು?

ಇ) ಎಷ್ಟು ಜಸ್ತಿ ಮಾಡಲಾಗಿದೆ? ದಾಖಲು ಮಾಡಿದ ಪ್ರಕರಣಗಳು ಎಷ್ಟು? ಶಿಕ್ಷೆಗೆ ಒಳಪಡಿಸಿದ ಪ್ರಕರಣಗಳು ಎಷ್ಟು?

ಈ) ಯುವ ಜನತೆ ಡ್ರಗ್ಸ್‌ನತ್ತ ಆಕರ್ಷಿತರಾಗುತ್ತಿದ್ದು ಇದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮ ಏನು?

ಡಾ|| ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮೈಸೂರಿನಲ್ಲಿ ಔಷಧಿ ನಿಯಂತ್ರಣ ಇಲಾಖೆಯ ಮೂರು ಕಛೇರಿಗಳಿದ್ದು ಅವುಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವಿವರಗಳು ಕೆಳಕಂಡಂತಿದೆ:-

ಹುದ್ದೆಗಳ ಹೆಸರು	ಮಂಜೂರಾಗಿರುವ ಹುದ್ದೆಗಳು	ಭರ್ತಿಯಾಗಿರುವ ಹುದ್ದೆಗಳು	ಖಾಲಿ ಇರುವ ಹುದ್ದೆಗಳು
ಉಪ ಔಷಧ ನಿಯಂತ್ರಕರು.	1	1	-
ಸಹಾಯಕ ಔಷಧ ನಿಯಂತ್ರಕರು.	2	1	1
ಔಷಧ ಪರಿವೀಕ್ಷಕರು.	5	4	1